ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ. PW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿನಾಂಕ 26.06.2025

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

ನನಗೆ ಕನ್ನಡ ಓದಲು ಮತ್ತು ಬರೆಯಲು ಬರುತ್ತದೆ. ನನಗೆ ಇಂಗ್ಲೀಷ್ ಭಾಷೆ ಓದಲು ಹಾಗೂ ಬರೆಯಲು ಬರುವುದಿಲ್ಲ. ಯಾವ ಕಾರಣಕ್ಕಾಗಿ ನೀವು ಆರೋಪಿ ವಿರುದ್ಧ ಈ ದಾವೆಯನ್ನು ದಾಖಲಿಸಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಆರೋಪಿ ನನ್ನ ಬಳಿಹಣ ಪಡೆದುಕೊಂಡಿದ್ದು ಅದಕ್ಕೆ ಸಂಬಂಧಿಸಿದಂತೆ ಈ ದಾವೆ ದಾಖಲಿಸಿರುತ್ತೇನೆ ಎಂದು ನುಡಿಯುತ್ತಾರೆ. ಆರೋಪಿ ನಿಮ್ಮ ಬಳಿ ಎಷ್ಟು ಹಣ ಪಡೆದುಕೊಂಡಿದ್ದರು ಎಂದರೆ ಸಾಕ್ಷಿ ರೂ.3,50,000/- ಹಣ ಪಡೆದುಕೊಂಡಿದ್ದರು ಎಂದು ನುಡಿಯುತ್ತಾರೆ. ದಿನಾಂಕ 18.01.2022 ರಂದು ನಿಮ್ಮ ಬ್ಯಾಂಕ್ ಖಾತೆಯಲ್ಲಿ ರೂ.3,50,000/- ಹಣ ಇತ್ತೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇತ್ತು ಎಂದು ನುಡಿಯುತ್ತಾರೆ. ದಿನಾಂಕ 18.01.2022 ರಂದು ನೀವು ನಿಮ್ಮ ಖಾತೆಯಿಂದ ರೂ.3,50,000/- ಹಣವನ್ನು ಡ್ರಾ ಮಾಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ನಿಮಗೆ ಎಷ್ಟು ಎಕರೆ ಜಮೀನು ಇರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ಜಮೀನು ಯಾವುದು ಇರುವುದಿಲ್ಲ ನನ್ನ ತಂದೆಗೆ ಸೇರಿದ 6 ಎಕರೆ ಜಮೀನನ್ನು ನಾನೇ ಸಾಗುವಳಿ ಮಾಡುತ್ತಿದ್ದೇನೆ ಎಂದು ನುಡಿಯುತ್ತಾರೆ. ಸದರಿ 6 ಎಕರೆ ಜಮೀನಿಗೆ ಸಂಬಂಧಿಸಿದಂತೆ ಸೊಸೈಟಿಯಲ್ಲಿ ಹಾಗೂ ಸ್ಥಳೀಯ ಬ್ಯಾಂಕಿನಲ್ಲಿ ಅಡಮಾನ ಮಾಡಿ ನೀವು ಸಾಲವನ್ನು ತೆಗೆದುಕೊಂಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ನೀವು ಆರೋಪಿಗೆ ಸಾಲ ನೀಡಿದ ಎಷ್ಟು ದಿನಗಳ ನಂತರ ಆರೋಪಿ ಸದರಿ ಸಾಲವನ್ನು ನಿಮಗೆ ವಾಪಾಸ್ಸು ನೀಡುತ್ತೇನೆ ಎಂದು ಹೇಳಿದ್ದರು ಎನ್ನುವ ಪ್ರಶ್ನೆಗೆ ಸಾಕ್ಷಿಯು 2 ತಿಂಗಳ ನಂತರ ವಾಪಸ್ಸು ನೀಡುವುದಾಗಿ ಆರೋಪಿ ಹೇಳಿದ್ದರು ಎಂದು ನುಡಿಯುತ್ತಾರೆ. 2 ತಿಂಗಳುಗಳ ನಂತರ ಆರೋಪಿಗೂ ನಿಮಗೂ ಮಾತುಕತೆ ಆಗಿರುತ್ತದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅವರು ನನ್ನ ಕೈಗೆ ಸಿಕ್ಕಿರುವುದಿಲ್ಲ ಎಂದು ನುಡಿಯುತ್ತಾರೆ. ಅಲ್ಲಿಂದ ಈ ನ್ಯಾಯಾಲಯಕ್ಕೆ

ಹಾಜರಾಗುವವರೆಗೂ ಆರೋಪಿ ನಿಮ್ಮ ಕೈಗೆ ಸಿಕ್ಕಿರುವುದಿಲ್ಲವೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ.

ಹಣ ನೀಡಿದ ನಂತರ ನಿಮಗೂ ಹಾಗೂ ಆರೋಪಿ ನಡುವೆ ಯಾವುದಾದರೂ ಬರವಣಿಗೆ ಆಗಿರುತ್ತದೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಈ ಹಣದ ವ್ಯವಹಾರಕ್ಕೆ ಸಂಬಂಧಿಸಿದಂತೆ ಆರೋಪಿ ನಿಮಗೆ ಯಾವುದಾದರೂ ದಾಖಲೆಯನ್ನು ನೀಡಿದ್ದಾರೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಒಂದು ಚೆಕ್ ಅನ್ನು ನೀಡಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ಚೆಕ್ ಅನ್ನು ಯಾವಾಗ ನೀಡಿರುತ್ತಾರೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ದಿನಾಂಕ 18.01.2022 ರಂದು ನೀಡಿರುತ್ತಾರೆ ಎಂದು ನುಡಿಯುತ್ತಾರೆ. ನಿಪಿ.1 ಅನ್ನು ಸಾಕ್ಷಿಗೆ ತೋರಿಸಿ ಅದರಲ್ಲಿ ಏನು ಬರವಣಿಗೆ ಬರೆದಿರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅದನ್ನು ನೋಡಿ ನನ್ನ ಹೆಸರು, ಮೊತ್ತ , ಸೋಮಶೇಖರ್ ರವರ ಸಹಿ ಹಾಗೂ ಹೆಸರು ಇರುತ್ತದೆ ಎಂದು ನುಡಿಯುತಾತರೆ. ನಿಪಿ.1 ಚೆಕ್ ಅನ್ನು ಯಾರು ಬರೆದಿರುತ್ತಾರೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಆರೋಪಿಯೇ ಬರೆದಿರುತ್ತಾರೆ ಎಂದು ನುಡಿಯುತ್ತಾರೆ. ಈ ವ್ಯವಹಾರ ಆಗುವ ಮೊದಲು ನಿಮ್ಮ ಹಾಗೂ ಆರೋಪಿ ನಡುವೆ ಯಾವುದಾದರೂ ಹಣಕಾಸಿನ ವ್ಯವಹಾರ ಇತ್ತೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನೀವೇನಾದರೂ ನಿಮ್ಮ ಊರಿನಲ್ಲಿ ಸಾಲ ನೀಡುವುದು ಹಾಗೂ ಬಡ್ಡಿ ಪಡೆಯುವ ವ್ಯವಹಾರ ಏನಾದರೂ ಮಾಡುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ.

ಹಣ ನೀಡುವ ಸಂದರ್ಬದಲ್ಲಿ ಯಾರು ಯಾರು ಇದ್ದರು ಎನ್ನುವ ಪ್ರಶ್ನೆಗೆ ಸಾಕ್ಷಿಯು ನಾನು ಮತ್ತು ಆರೋಪಿ ಮಾತ್ರ ಇದ್ದೆವು ಎಂದು ನುಡಿಯುತ್ತಾರೆ. ನಾನು ಹಾಗೂ ಆರೋಪಿ ಆತ್ಮೀಯರಾಗಿದ್ದೆವು ಎಂದರೆ ಸರಿ.

ಆರೋಪಿಯದ್ದು ಕೋಳಿ ಫಾರಂ ವ್ಯಾಪಾರ ಇದ್ದ ಕಾರಣ ಅವರು ಸಾಮಾನ್ಯವಾಗಿ ಚೆಕ್ಕಿಗೆ ಸಹಿ ಮಾಡಿ ಮನೆಯಲ್ಲಿ ಇಡುವುದು ಅವರ ಹವ್ಯಾಸವಾಗಿತ್ತು ಎನ್ನುವ ಪ್ರಶ್ನೆಗೆ ಸಾಕ್ಷಿಯು ಗೊತ್ತಿಲ್ಲ ಎಂದು ನುಡಿಯುತ್ತಾರೆ.

ನಿಪಿ.1 ರಲ್ಲಿ ಆರೋಪಿಯ ಸಹಿಯ ಬರವಣಿಗೆಗೂ ಹಾಗುಾ ಉಳಿಕೆ ಬರವಣಿಗೆಗೂ ವ್ಯತ್ಯಾಸ ಇರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ನಿಪಿ.1 ಅನ್ನು ನೋಡಿ ಗೊತ್ತಿಲ್ಲ ಎಂದು

ನುಡಿಯುತ್ತಾರೆ. ಸಾಕ್ಷಿಯು ಮುಂದುವರೆದು ಆರೋಪಿ ನನಗೆ ನಿಪಿ.1 ಅನ್ನು ಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ.

ನಿಮ್ಮ ಮನೆಯ ವ್ಯವಹಾರವನ್ನು ಯಾರು ನೋಡಿಕೊಳ್ಳುತ್ತಾರೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ತಂದೆಯವರು ನೋಡಿಕೊಳ್ಳುತ್ತಾರೆ ಎಂದು ನುಡಿಯುತ್ತಾರೆ. ನಿಮ್ಮ ಮನೆಯ ಸ್ವತ್ತಿನ ಹಾಗೂ ಉಳಿಕೆ ಮೂಲಗಳಿಂದ ಬರುವ ಆದಾಯಗಳನ್ನು ನಿಮ್ಮ ತಂದೆಯವರೇ ತೆಗೆದುಕೊಳ್ಳುತ್ತಾರೆಯೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ಆದಾಯವನ್ನು ನಾನು ತೆಗೆದುಕೊಳ್ಳುತ್ತೇನೆ , ನನ್ನ ಅಣ್ಣನ ಆದಾಯವನ್ನು ಅವರು ತೆಗೆದುಕೊಳ್ಳುತ್ತಾರೆ ಹಾಗೂ ನನ್ನ ತಂದೆಯ ಆದಾಯವನ್ನು ನನ್ನ ತಂದೆಯವರು ತೆಗೆದುಕೊಳ್ಳುತ್ತಾರೆ ಎಂದು ನುಡಿಯುತ್ತಾರೆ.

ಹಣ ನೀಡುವ ಸಂದರ್ಬದಲ್ಲಿ ನೀವು 4 ಜನರ ಮುಖಾಂತರ ಅಥವಾ ಆರೋಪಿಯ ಹೆಂಡತಿ ಅಥವಾ ತಾಯಿಗೆ ತಿಳಿಸಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ಹೆಂಡತಿಗೆ ಹೇಳಿ ಆರೋಪಿಗೆ ಹಣ ನೀಡಿರುತ್ತೇನೆ ಎಂದು ನುಡಿಯುತ್ತಾರೆ. ಆರೋಪಿಗೆ ಹಣದ ತುರ್ತು ಅವಶ್ಯಕತೆ ಇತ್ತು ಎಂದು ನಿಮಗೇನಾದರೂ ಮನವರಿಕೆ ಆಗಿತ್ತೇ ಎನ್ನುವ ಪ್ರಶ್ನೆಗೆ ಸಾಕ್ಷಿಯು ಆಗಿತ್ತು ಎಂದು ನುಡಿಯುತ್ತಾರೆ. ಹಣವನ್ನು ನೀವು ಆರೋಪಿಗೆ ಎಲ್ಲಿ ನೀಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ನಮ್ಮ ಮನೆಯಲ್ಲಿ ನೀಡಿರುತ್ತೇನೆ ಎಂದು ನುಡಿಯುತ್ತಾರೆ.

ನೀವು ಆರೋಪಿಗೆ ಹಣ ನೀಡುವ ಸಂದರ್ಬದಲ್ಲಿ ರೂ.3,50,000/- ಹಣ ಯಾರ ಸುಪರ್ದಿನಲ್ಲಿ ಇತ್ತು ಎನ್ನುವ ಪ್ರಶ್ನೆಗೆ ಸಾಕ್ಷಿಯು ನನ್ನ ಬಳಿಯೇ ಇತ್ತು ಎಂದು ನುಡಿಯುತ್ತಾರೆ. ಆ ದಿನ ನನ್ನ ಬಳಿ ರೂ.3,50,000/- ಹಣ ಇತ್ತು ಎಂದು ತೋರಿಸಲು ನಾನು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಲು ನನಗೆ ಯಾವುದೇ ತೊಂದರೆ ಇರುವುದಿಲ್ಲ.

ನೀವು ಈಗಲೂ ಸಹಾ ಬಿ.ಪಿ.ಎಲ್ ಕಾರ್ಡ್ ನಲಿ ಅಕ್ಕಿಯನ್ನು ತೆಗೆದುಕೊಳ್ಳುತ್ತಿದ್ದೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯು ಮುಂದುವರೆದು ನಮ್ಮದು ಎ.ಪಿ.ಎಲ್ ಕಾರ್ಡ್ ಎಂದು ನುಡಿಯುತ್ತಾರೆ. ನಮಗೆ ಬಿ.ಪಿ.ಎಲ್ ಕಾರ್ಡ್ ಇದ್ದು ರೂ.3,50,000/- ಗಳನ್ನು ಹೊಂದಿಸುವಷ್ಟು ಆರ್ಥಿಕ ಸಾಮರ್ಥ್ಯ ಇರುವುದಿಲ್ಲ ಎಂದರೆ ಸರಿಯಲ್ಲ.

(ಈ ಹಂತದಲ್ಲಿ ಆರೋಪಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರಿದ್ದು ಆಲಿಸಿ ಅನುಮತಿ ನೀಡಲಾಯಿತು)

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಸಾ.ಓ.ಹೇ.ಸ.ಒ**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ., ಶ್ರೀರಂಗಪಟ್ಟಣ.**